# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ಸಹಾಯಕ ಕಾರ್ಯಪಾಲಕ ಅಭಿಯಂತರರ ಕಛೇರಿ, ಕೆ.ಆರ್.ಪುರ ಉಪವಲಯ, ಮಹದೇವಪುರ ವಲಯ, ಬೆಂಗಳೂರು

ಸಂಖ್ಯೆ.ಬಿಬಿಎಂಪಿ/ಸ.ಕಾ.ಅ/ಕೆ.ಆರ್.ಪಿ.ಉವ/ಪಿಆರ್/ /2022-23 ದಿನಾಂಕ: 02-12-2022

ಮಾನ್ಯ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಕಛೇರಿ ಆದೇಶ ಸಂ: ಬಿ12(5)/ಪಿಆರ್/35/2020-21 ದಿನಾಂಕ: 21-09-2020 ರಂತೆ ದಿನಾಂಕ: 02-12-2022 ರಂದು ಹೊಸ ವಾರ್ಡ್ ಸಂಖ್ಯೆ:87 ಮೇಡಹಳ್ಳಿ ವಾರ್ಡ್ ಕಮಿಟಿ ಸಭೆಯನ್ನು ವಾರ್ಡ್ ಕಛೇರಿಯಲ್ಲಿ ನೋಡಲ್ ಅಧಿಕಾರಿಗಳು ಹಾಗೂ ಶ್ರೀ.ಕೇಶವ್, ಸಹಾಯಕ ಅಭಿಯಂತರರು ರವರ ಅಧ್ಯಕ್ಷತೆಯಲ್ಲಿ ನಡೆದಿರುವ ಸಭೆಯ ನಡುವಳಿಗಳು:

## "ಸಭೆಯಲ್ಲಿ ಚರ್ಚಿಸಲಾದ ವಿಷಯಗಳು"

| ಕ್ರಮ ಸಂಖ್ಯೆ | ವಿಷಯ | ತೀರ್ಮಾನ |
|---|---|---|
| 1. | ಬಿ.ಡಬ್ಲ್ಯು.ಎಸ್.ಎಸ್.ಬಿ ವತಿಯಿಂದ ಅಗೆದಿರುವ ರಸ್ತೆಗಳನ್ನು ಪುನಸ್ಥೇತಗೊಳಿಸುವ ಬಗ್ಗೆ. | ಬಿ.ಡಬ್ಲ್ಯು.ಎಸ್.ಎಸ್.ಬಿ ವತಿಯಿಂದ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗಾಗಿ ಒಳಚರಂಡಿ ಸಂಪರ್ಕ ಮತ್ತು ಕುಡಿಯುವ ನೀರಿನ ಸಮರ್ಪಕ ಸರಬರಾಜುಗಾಗಿ ಕೈಗೊಂಡಿರುವ ಅನೇಕ ಕಾಮಗಾರಿಗಳನ್ನು ಕೈಗೊಂಡು ಅಗೆದಿರುವ ರಸ್ತೆಗಳನ್ನು ಪುನಸ್ಥೇತಗೊಳಿಸದೇ ಅನೇಕ ಕಡೆ ಹಾಗೆಯೇ ಬಿಟ್ಟಿರುವುದು ಕಂಡು ಬಂದಿರುತ್ತದೆ. ಇದರಿಂದ ವಾರ್ಡ ವ್ಯಾಪ್ತಿಯಲ್ಲಿ ಸಾರ್ವಜನಿಕರ ಸುಗಮ ಸಂಚಾರಕ್ಕೆ ಸಮಸ್ಯೆಯಾಗುತ್ತಿದ್ದು, ಆದರಿಂದ ರಸ್ತೆಯನ್ನು ಪುನಸ್ಥೇತಗೊಳಿಸಲು ಹಾಜರಿದ್ದ ಸದರಿ ಅಧಿಕಾರಿಗಳಿಗೆ ತಿಳಿಸಿದರು.<br><br>ಸನ್‌ಶೈನ್ ಬಡಾವಣೆಯ 3ನೇ ಕ್ರಾಸ್‌ನಲ್ಲಿ ಬಿ.ಡಬ್ಲ್ಯು.ಎಸ್.ಎಸ್.ಬಿ ರವರು ರಸ್ತೆಯನ್ನು ಅಗೆದು ಪುನಸ್ಥೇತಗೊಳಿಸದೆ ಹಾಗೆ ಬಿಟ್ಟಿರುವುದರಿಂದ ,ವಾಹನ ಚಾಲಕರಿಗೆ ಹಾಗೂ ತೊಂದರೆ ಉಂಟಾಗುತ್ತಿದ್ದು,ಕೂಡಲೇ ಸಮಸ್ಯೆಯನ್ನು ಪರಿಹರಿಸುವಂತೆ ಸಭೆಯಲ್ಲಿ ತಿಳಿಸಿದರು. |
| 2. | ಬೀದಿ ದೀಪಗಳ ನಿರ್ವಹಣೆ ಬಗ್ಗೆ. | ಸಭೆಯಲ್ಲಿ ಹಾಜರಿದ್ದ ಸಾರ್ವಜನಿಕರು ಹಾಗೂ ವಾರ್ಡ್ ಮಟ್ಟದ ಕಾರ್ಯದರ್ಶಿಗಳು ಸಭೆಯನ್ನು ಕುರಿತು ಮಾತನಾಡುತ್ತಾ, ವಾರ್ಡ್‌ಗಳಲ್ಲಿ ಕೆಲವೊಂದು ಬೀದಿ ದೀಪಗಳು ಉರಿಯದೇ ಇರುವುದರಿಂದ, ಹಾಗೂ ಕೆಲವೊಂದ ಕಡೆ ಬೀದಿ ದೀಪಗಳು ಇರುವುದಿಲ್ಲ ಆದ್ದರಿಂದ ವಾರ್ಡ್ ಮಟ್ಟದಲ್ಲಿ ಹಲವಾರು ಸಮಸ್ಯೆಗಳು ಉದ್ಭವವಾಗಿರುತ್ತದೆ. ಇದರಲ್ಲಿ ಪ್ರಮುಖವಾಗಿ ಸರಗಳ್ಳತನಗಳು ಹಾಗೂ ಪುಂಡ ಪೋಕರಿಗಳ ಆವಳಿಗಳು ಸಂಭವಿಸುತ್ತಿರುವ ಬಗ್ಗೆ ತಿಳಿಸಿದರು. ಇದಕ್ಕೆ ಹಾಜರಿದ್ದ ಸಹಾಯಕ ಕಾರ್ಯಪಾಲಕ ಅಭಿಯಂತರರು (ವಿದ್ಯುತ್) ರವರು ಮಾತನಾಡುತ್ತಾ ಬೀದಿ ದೀಪ ನಿರ್ವಹಣೆ ಮಾಡುವ ಗುತ್ತಿಗೆದಾರರಿಂದ ಕಾಲಕಾಲಕ್ಕೆ ಬೀದಿ ದೀಪಗಳ ನಿರ್ವಹಣೆಯನ್ನು ನಿರ್ವಹಿಸಿ ಮತ್ತು ಹೊಸದಾಗಿ ಬೀದಿ ದೀಪಗಳನ್ನು ಅಳವಡಿಸಲು ಸೂಚಿಸಿ, ಮುಂದಿನ ದಿನಗಳಲ್ಲಿ ಇಂತಹ ತೊಂದರೆಗಳು ಆಗದಂತೆ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.<br>ಸನ್‌ಶೈನ್ ಬಡಾವಣೆಯ 1ನೇ ಕ್ರಾಸ್‌ನಲ್ಲಿ ಬೀದಿ ದೀಪಗಳನ್ನು ಅಳವಡಿಸಿಕೊಡುವಂತೆ ಸಭೆಯಲ್ಲಿ ತಿಳಿಸಿದರು.ಇದಕ್ಕೆ ಹಾಜರಿದ್ದ ಸದರಿ ಇಲಾಖೆಯ ಅಧಿಕಾರಿಗಳು ಕೂಡಲೇ ಸಮಸ್ಯೆ ಪರಿಹರಿಸುವುದಾಗಿ ತಿಳಿಸಿದರು. |

| | | |
|---|---|---|
| 3. | ವಾರ್ಡ ವ್ಯಾಪ್ತಿಯಲ್ಲಿ ನೀರಿನ ಸರಬರಾಜು ಸೌಲಭ್ಯ ಒದಗಿಸುವ ಬಗ್ಗೆ. | ವಾರ್ಡ ವ್ಯಾಪ್ತಿಯಲ್ಲಿ ನೀರಿನ ಸರಬರಾಜು ಸೌಲಭ್ಯವನ್ನು ಒದಗಿಸಲು ಬಿ.ಡಬ್ಲ್ಯುಎಸ್.ಎಸ್.ಬಿ ಯ ಅಧಿಕಾರಿಗಳಿಗೆ ಸಭೆಯಲ್ಲಿ ಸೂಚಿಸಲಾಯಿತು. ಹಾಗೂ ಮುಂದಿನ ದಿನಗಳಲ್ಲಿ ಯಾವುದೇ ತೊಂದರೆಗಳು ಬರದಂತೆ ನೋಡಿಕೊಳ್ಳಲು ತಿಳಿಸಲಾಯಿತು.<br><br>ಇಡನ್ ಗಾರ್ಡನ್ ಬಡಾವಣೆ, ಮುಕ್ತಿ ವಿನಾಯಕ ಬಡಾವಣೆ, ಮತ್ತು ಆಶ್ರಯ ಬಡಾವಣೆ ಗಳಲ್ಲಿ ನೀರಿನ ಸರಬರಾಜು ಸೌಲಭ್ಯವನ್ನು ಒದಗಿಸುವಂತೆ ಕೋರಿದರು.ಇದಕ್ಕೆ ಸಭೆಗೆ ಹಾಜರಿದ್ದ ಬಿ.ಡಬ್ಲ್ಯುಎಸ್.ಎಸ್.ಬಿ ಇಲಾಖೆಯ ಅಧಿಕಾರಿಗಳು ಈ ಸಮಸ್ಯೆಗೆ ಸೂಕ್ತ ಕ್ರಮವನ್ನು ತೆಗೆದುಕೊಳ್ಳುವುದಾಗಿ ಸಭೆಯಲ್ಲಿ ತಿಳಿಸಿದರು. |
| 4. | ಸ್ಕೈವಾಕ್ ನಲ್ಲಿ CCTV camera ಅಳವಡಿಸುವಂತೆ. | ಮೇಡಹಳ್ಳಿಯ ಹಳೇ ಮದ್ರಾಸ್ ರಸ್ತೆಯಲ್ಲಿರುವ ಸ್ಕೈವಾಕ್ ನಲ್ಲಿ CCTV camera ಅಳವಡಿಸಿಕೊಡುವಂತೆ ಕೋರಿದರು.ಇದು NHAI ಇಲಾಖೆ ರವರಿಗೆ ಸಂಬಂಧಿಸಿದ್ದು, ಮುಂದಿನ ಕ್ರಮಕ್ಕಾಗಿ ತಮಗೆ ತಿಳಿಸಿದೆ. |
| 5. | ಮೇಡಹಳ್ಳಿಯಲ್ಲಿ ಸಂಚಾರ ದಟ್ಟಣೆಯನ್ನು ನಿಯಂತ್ರಿಸುವ ಬಗ್ಗೆ. | ಮೇಡಹಳ್ಳಿಯ ಬಸ್ ನಿಲ್ದಾಣ ಬಳಿಯಿರುವ ಮೇಲ್ ಸೇತುವೆಯಲ್ಲಿ ಸಂಚಾರ ದಟ್ಟಣೆ ಸಂಭವಿಸುತ್ತದ್ದು, ಸಾರ್ವಜನಿಕರಿಗೆ ಸಮಸ್ಯೆ ಉಂಟಾಗುತ್ತಿದ್ದು ಕೂಡಲೇ ಸಂಚಾರ ಪೋಲೀಸ್ ರವರು ಕೂಡಲೇ ಕ್ರಮ ಕೈಗೊಳ್ಳುವಂತೆ ಸಭೆಯಲ್ಲಿ ತಿಳಿಸಿದರು. |

ವಾರ್ಡ್ ಕಮಿಟಿ ನೋಡಲ್ ಅಧಿಕಾರಿ ಮತ್ತು ಕಾರ್ಯದರ್ಶಿಗಳು, ನೌಕರರು, ಪದಾಧಿಕಾರಿಗಳು ಹಾಗೂ ಸಾರ್ವಜನಿಕರು ಈ ಮೇಲ್ಕಂಡಂತೆ ತಿಳಿಸಿರುವ ಸಭೆಯಲ್ಲಿ ಕೈಗೊಂಡ ತೀರ್ಮಾನದಂತೆ ಹಾಗೂ ನಿರ್ಣಯಗಳಂತೆ ಮೇಡಹಳ್ಳಿ ವಾರ್ಡ್ ನಂ:87 ವ್ಯಾಪ್ತಿಯಲ್ಲಿ ಕೆಲಸ ಕಾರ್ಯಗಳನ್ನು ಆಧ್ಯತೆ ಮೇರೆಗೆ ನಿರ್ವಹಿಸಲು ನಿರ್ಣಯಿಸಲಾಯಿತು.

ಮೇಡಹಳ್ಳಿ ವಾರ್ಡ ನಂ: 87 ರ ವಾರ್ಡ್ ಕಮಿಟಿಯ ಕಾರ್ಯದರ್ಶಿಗಳಾದ ಸಹಾಯಕ ಅಭಿಯಂತರರು, ರವರು ಸಭೆಯಲ್ಲಿ ತೆಗೆದುಕೊಂಡ ನಿರ್ಣಯದಂತೆ ಕಾರ್ಯನಿರ್ವಹಿಸಲು ಕೋರುತ್ತಾ, ವಂದನಾರ್ಪಣೆಯನ್ನು ಸಲ್ಲಿಸಿ, ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ವಾರ್ಡ್ ಕಾರ್ಯದರ್ಶಿ
ಸಹಾಯಕ ಅಭಿಯಂತರರು
ವಾರ್ಡ್ ನಂ: 87

**ಪ್ರತಿಯನ್ನು**

1. ಮಾನ್ಯ ಜಂಟಿ ಆಯುಕ್ತರು, ಬಿ.ಬಿ.ಎಂ.ಪಿ ಮಹದೇವಪುರ ವಲಯ,ರವರ ಮಾಹಿತಿಗಾಗಿ ಸಲ್ಲಿಸಿದೆ.
2. ಮಾನ್ಯ ಮುಖ್ಯ ಅಭಿಯಂತರರು, ಬಿ.ಬಿ.ಎಂ.ಪಿ ಮಹದೇವಪುರ ವಲಯ, ರವರ ಮಾಹಿತಿಗಾಗಿ ಸಲ್ಲಿಸಿದೆ.
3. ಮಾನ್ಯ ಡಿ.ಹೆಚ್.ಓ ಬಿ.ಬಿ.ಎಂ.ಪಿ ಮಹದೇವಪುರ ವಲಯ, ರವರ ಸೂಕ್ತ ಮಾಹಿತಿ/ಕ್ರಮಕ್ಕಾಗಿ ಸಲ್ಲಿಸಿದೆ.
4. ಎಲ್ಲಾ ಅಧಿಕಾರಿ ಸಿಬ್ಬಂದಿಗಳ ಕ್ರಮಕ್ಕಾಗಿ.
5. ಎಲ್ಲಾ ಕಮಿಟಿ ಸದಸ್ಯರುಗಳ ಮಾಹಿತಿಗಾಗಿ ಸಲ್ಲಿಸಿದೆ.
6. ಕಛೇರಿ ಪ್ರತಿ.